ಕುಡಿಯುವ ನೀರಿನ ಯೋಜನೆಗಳಿಗೆ ಅನುದಾನ ಬಿಡುಗಡೆ

338 (1717) : ಶ್ರೀಮತಿ ವಿಜಯಲಕ್ಷ್ಮಮ್ಮ ಬಂಡಿಸಿದ್ದೇಗೌಡ (ಶ್ರೀರಂಗಪಟ್ಟಣ) – ಮಾನ್ಯ ಗ್ರಾಮೀಣ ನೀರು ಪೂರೈಕೆ ನೈರ್ಮಲ್ಯ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಕುಡಿಯುವ ನೀರು ಯೋಜನೆಗಳಿಗೆ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನವೆಷ್ಟು ;

ಆ) ಈ ಯೋಜನೆಯಲ್ಲಿ ಶ್ರೀರಂಗಪಟ್ಟಣ ಕ್ಷೇತ್ರದ ತಾಲ್ಲೂಕುಗಳು ಸೇರಿದೆಯೇ ;

ಇ) ಈ ತಾಲ್ಲೂಕುಗಳಿಗೆ ನಿಗದಿಯಾಗಿರುವ ಅನುದಾನದ ಮೊತ್ತವೆಷ್ಟು ;

ಈ) ಈ ಯೋಜನೆಗಳನ್ನು ಕಾರ್ಯಗತಗೊಳಿಸಲು ಯಾವ ಕಾಲಾವಧಿಯೊಳಗೆ ಅನುದಾನವನ್ನು ಬಿಡುಗಡೆ ಮಾಡಲಾಗುವುದು ?

ಶ್ರೀ ಎಂ. ರವೀಂದ್ರನಾಥ (ಗ್ರಾಮೀಣ ನೀರು ಪೂರೈಕೆ ನೈರ್ಮಲ್ಯ ಮತ್ತು ಸಕ್ಕರೆ ಸಚಿವರು) –

ಅ) ರೂ. 750 ಕೋಟಿ.

ಆ) ಹೌದು

ಇ) ಅಗತ್ಯತೆಯನುಸಾರ ಜಿಲ್ಲಾ ಪಂಚಾಯತ್ ಹಂತದಲ್ಲಿ ಅನುಮೋದಿತ ಕ್ರಿಯಾ ಯೋಜನೆಯನ್ವಯ ತಾಲ್ಲೂಕುವಾರು ಅನುದಾನ ನಿಗದಿಯಾಗುತ್ತದೆ.

ಈ) ಉದ್ದೇಶಿತ ಯೋಜನೆಗಳನ್ನು ಕಾರ್ಯಗತಗೊಳಿಸಲು, ಅನುದಾನ ಲಭ್ಯತೆ ಆಧರಿಸಿ 2006–07ರ ಸಾಲಿನಲ್ಲಿ ಹಣ ಬಿಡುಗಡೆ ಮಾಡಲಾಗುವುದು.

ಬೆಳೆ ವಿಮೆ ಹಣವನ್ನು ಪಾವತಿಸುವುದು

339 (1719) ಶ್ರೀ ವಿಶ್ವನಾಥ ಹೆಚ್.ಎಂ. (ಸಕಲೇಪುರ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಆಲೂರು ತಾಲ್ಲೂಕಿನಲ್ಲಿ 2004–05 ಮತ್ತು 2005–06ನೇ ಸಾಲಿನಲ್ಲಿ ಬೆಳೆ ವಿಮೆ ಪಾವತಿಸಿರುವ ರೈತರ ಸಂಖ್ಯೆ ಎಷ್ಟು ; (ವರ್ಷವಾರು ವಿವರ ನೀಡುವುದು) ;